ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014-15 : ದಿನಾಂಕ: 1-9-2014

ಪತ್ರಿಕಾ ಪ್ರಕಟಣೆ

## ನೂತನ ರಾಜ್ಯಪಾಲರಾಗಿ ವಜುಭಾಯಿ ರುಡಾಭಾಯಿ ವಾಲಾ ಪ್ರಮಾಣ ವಚನ

ಬೆಂಗಳೂರು, ಸೆಪ್ಟೆಂಬರ್ 1 :

ಕರ್ನಾಟಕದ ನೂತನ ರಾಜ್ಯಪಾಲರಾಗಿ ಶ್ರೀ ವಜುಭಾಯಿ ರುಡಾಭಾಯಿ ವಾಲಾ ಅವರು ರಾಜಭವನದ ಗಾಜಿನ ಮನೆಯಲ್ಲಿ ನಡೆದ ವಿಶೇಷ ಸಮಾರಂಭದಲ್ಲಿ ಇಂದು ಪ್ರಮಾಣ ವಚನ ಸ್ವೀಕರಿಸಿದರು. ಶ್ರೀ ವಜುಭಾಯಿ ಅವರು ರಾಷ್ಟ್ರ ಭಾಷೆ ಹಿಂದಿಯಲ್ಲಿ ಹಾಗೂ ಭಗವಂತನ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು.

ಕರ್ನಾಟಕ ಉಚ್ಛ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ಶ್ರೀ ಡಿ. ಹೆಚ್. ವಘೇಲಾ ಅವರು ನೂತನ ರಾಜ್ಯಪಾಲರಿಗೆ ಅಧಿಕಾರ ಹಾಗೂ ಗೌಪ್ಯತಾ ಪ್ರತಿಜ್ಞಾ ವಿಧಿ ಬೋಧಿಸಿದರು.

ರಾಜ್ಯಪಾಲರಾಗಿ ಪ್ರಮಾಣ ವಚನ ಸ್ವೀಕರಿಸಿದ ಮರುಕ್ಷಣವೇ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಶ್ರೀ ವಜುಭಾಯಿ ಅವರನ್ನು ಶಾಲು ಹೊದಿಸಿ, ಗಂಧದ ಮಾಲೆ ಅರ್ಪಿಸಿ ಅಭಿನಂದಿಸಿದರು.

ಈ ಮುನ್ನ ರಾಜ್ಯದ ಮುಖ್ಯಕಾರ್ಯದರ್ಶಿ ಶ್ರೀ ಕೌಶಿಕ್ ಮುಖರ್ಜಿ ಅವರು ರಾಷ್ಟ್ರಪತಿಯವರು ಹೊರಡಿಸಿರುವ ನೇಮಕಾತಿ ಆದೇಶವನ್ನು ವಾಚಿಸಿದರು.

ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ, ಕೇಂದ್ರ ರೈಲ್ವೆ ಸಚಿವ ಶ್ರೀ ಡಿ. ವಿ. ಸದಾನಂದಗೌಡ, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ಸಚಿವ ಶ್ರೀ ಅನಂತಕುಮಾರ್, ರಾಜ್ಯ ವಿಧಾನ ಪರಿಷತ್ತಿನ ಸಭಾಪತಿ ಶ್ರೀ ಡಿ. ಹೆಚ್. ಶಂಕರಮೂರ್ತಿ, ರಾಜ್ಯ ವಿಧಾನ ಸಭಾಧ್ಯಕ್ಷ ಶ್ರೀ ಕಾಗೋಡು ತಿಮ್ಮಪ್ಪ, ಉಪಾಧ್ಯಕ್ಷ ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ, ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವ ಶ್ರೀ ಆರ್. ವಿ. ದೇಶಪಾಂಡೆ, ಗೃಹ ಸಚಿವ ಶ್ರೀ ಕೆ. ಜೆ. ಜಾರ್ಜ್, ಇಂಧನ ಸಚಿವ ಶ್ರೀ ಡಿ.ಕೆ. ಶಿವಕುಮಾರ್, ಮೂಲಸೌಕರ್ಯ ಅಭಿವೃದ್ಧಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್, ಸಮಾಜ ಕಲ್ಯಾಣ ಸಚಿವ ಶ್ರೀ ಹೆಚ್. ಆಂಜನೇಯ, ನಗರಾಭಿವೃದ್ಧಿ ಸಚಿವ ಶ್ರೀ ವಿನಯ್‌ಕುಮಾರ್ ಸೊರಕೆ, ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಶ್ರೀ ದಿನೇಶ್ ಗುಂಡೂರಾವ್, ಯುವಜನ ಸಬಲೀಕರಣ, ಕ್ರೀಡೆ ಹಾಗೂ ಮೀನುಗಾರಿಕೆ ಸಚಿವ ಶ್ರೀ ಕೆ. ಅಭಯ್‌ಚಂದ್ರ, ಪ್ರತಿಪಕ್ಷ ನಾಯಕ ಶ್ರೀ ಜಗದೀಶ್‌ಶೆಟ್ಟರ್, ವಿಧಾನ ಪರಿಷತ್ತಿನ ಪ್ರತಿಪಕ್ಷ ನಾಯಕ ಶ್ರೀ ಕೆ.ಎಸ್. ಈಶ್ವರಪ್ಪ, ಮಾಜಿ ಮುಖ್ಯಮಂತ್ರಿ ಶ್ರೀ ಬಿ. ಎಸ್. ಯಡಿಯೂರಪ್ಪ, ಮಾಜಿ ಉಪ ಮುಖ್ಯಮಂತ್ರಿ ಶ್ರೀ ಆರ್. ಅಶೋಕ್, ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷ ಶ್ರೀ ಸಿ. ಎಂ. ಇಬ್ರಾಹಿಂ ಬೆಂಗಳೂರು ಮಹಾಪೌರ ಶ್ರೀ ಬಿ. ಎಸ್. ಸತ್ಯನಾರಾಯಣ, ಲೋಕಾಯುಕ್ತ ನ್ಯಾಯಮೂರ್ತಿ ಶ್ರೀ ವೈ. ಭಾಸ್ಕರರಾವ್, ಅವರೂ ಸೇರಿದಂತೆ ಹಲವು ಗಣ್ಯರು, ನಾಗರೀಕ ಹಾಗೂ ಪೊಲೀಸ್ ಅಧಿಕಾರಿಗಳು ಈ ಸಮಾರಂಭದಲ್ಲಿ ಹಾಜರಿದ್ದರು.